# ಜಿಂದಾಲ್ ಕಾರ್ಖಾನೆ ಸಂಪೂರ್ಣವಾಗಿ ಬಂದ್ ಮಾಡಲು ಮನವಿ



ಬಳ್ಳಾರಿ ಜೂನ್ 25. ಕಳೆದ ಮಾರ್ಚ್ ತಿಂಗಳಲ್ಲಿ ಬಳ್ಳಾರಿ ಜಿಲ್ಲೆಯಲ್ಲಿ ಕೇವಲ ಬೆರಳೆಣಿಕೆಯಷ್ಟು ಇದ್ದ ಕೋರೋನಾ ಸೋಂಕಿತರು ಇಂದು ಸುಮಾರು 500ರ ಗಡಿ ದಾಟಿದೆ. ಇದಕ್ಕೆಲ್ಲಾ ಕಾರಣ ಜಿಂದಾಲ್ ಕಾರ್ಖಾನೆಯ ನಿರ್ಲಕ್ಷ ಧೋರಣೆಯಾಗಿರುತ್ತದೆ. ಇಡೀ ದೇಶವೇ ಲಾಕ್‌ಡೌನ್ ಆಗಿದ್ದರೂ ಕಾರ್ಖಾನೆ ಮಾತ್ರ ಸರದಿ ಪಾಳಿಯಲ್ಲಿ ನೌಕರರ ಆರೋಗ್ಯದ ಬಗ್ಗೆ ಯಾವುದೇ ಮುಂಜಾಗ್ರತೆ ಕ್ರಮ ತೆಗೆದುಕೊಳ್ಳದೆ ತನ್ನ ಬಂಡವಾಳಶಾಹಿತನವನ್ನು ಮೆರೆದಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ರಾಜ್ಯ ಘಟಕ ಬಳ್ಳಾರಿ ಶಾಖೆ ಜಿಲ್ಲಾಧಿಕಾರಿಗೆ ನೀಡಿದ ಮನವಿ ಪತ್ರದಲ್ಲಿ ಮನವಿ ಮಾಡಿದೆ.

ಕಳೆದ ಒಂದು ವಾರದಿಂದ ಜಿಂದಾಲ್ ಕಾರ್ಖಾನೆಯಲ್ಲಿ ಸೋಂಕಿತರ ಸಂಖ್ಯೆ ಜಾಸ್ತಿಯಾದ್ದರಿಂದ ಜಿಲ್ಲಾಡಳಿತ ಅದನ್ನು ಸೀಲ್‌ಡೌನ್ ಮಾಡಿ ಆದೇಶ ಹೊರಡಿಸಿದೆ. ಆದರೂ ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲೂ ಕಾರ್ಖಾನೆ ಖಾಯಂ ಅಥವಾ ಗುತ್ತಿಗೆ ಕಾರ್ಮಿಕರು ಇರುವುದರಿಂದ ಈಗಾಗಲೇ ಮಾರಕ ಸೋಂಕು ಗ್ರಾಮಗಳಲ್ಲಿ ಪಸರಿಸಿದೆ. ಮತ್ತು ಮುಂದಿನ ದಿನಗಳಲ್ಲಿ ಇನ್ನಷ್ಟು ಗ್ರಾಮಗಳ ಜನರು ಈ ಸೋಂಕಿಗೆ ತುತ್ತಾಗುವ ಸಂಭವವಿದೆ. ಆದಕಾರಣ ಸದರಿ ಜಿಂದಾಲ್ ಕಾರ್ಖಾನೆಯನ್ನು ಲಾಕ್‌ಡೌನ್ ಅಥವಾ ಸೀಲ್‌ಡೌನ್‌ನಿಂದ ತಾತ್ಕಾಲಿಕವಾಗಿ ಬಂದ್ ಮಾಡದೇ ಕಾರ್ಖಾನೆಯ ಎಲ್ಲಾ ಯಂತ್ರಗಳನ್ನು ಸಂಪೂರ್ಣವಾಗಿ ಬಂದ್ ಮಾಡಿ ತನ್ನ ಎಲ್ಲಾ ನೌಕರರಿಗೆ, ಕಾರ್ಮಿಕರಿಗೆ ವೇತನ ಸಹಿತ ಒಂದು ತಿಂಗಳು ರಜೆಯನ್ನು ನೀಡಿ ಕಾರ್ಖಾನೆಯ ನೌಕರರ ಮತ್ತು ಅವರ ಕುಟುಂಬವನ್ನು ರಕ್ಷಿಸಬೇಕೆಂದು ವೇದಿಕೆಯ ರಾಜ್ಯ ಸಂಚಾಲಕರಾದ ಅದ್ದಿಗೇರಿ ರಾಮಣ್ಣ ಈ ಮೂಲಕ ತಮ್ಮಲ್ಲಿ ಒತ್ತಾಯಿಸಿದ್ದಾರೆ. ಒಂದು ವೇಳೆ ಸಂಪೂರ್ಣವಾಗಿ ಕಾರ್ಖಾನೆಯನ್ನು ಬಂದ್ ಮಾಡಲು ಆಗದೇ ಇದ್ದ ಪಕ್ಷದಲ್ಲಿ ಮುಂದಿನ ದಿನಗಳಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷರಾದ ಪ್ರವೀಣ್‌ಕುಮಾರ್ ಶೆಟ್ಟಿಯವರ ನೇತೃತ್ವದಲ್ಲಿ ನೂರಾರು ಕಾರ್ಯಕರ್ತರೊಂದಿಗೆ ಜಿಂದಾಲ್ ಕಾರ್ಖಾನೆಯನ್ನು ಮುತ್ತಿಗೆ ಹಾಕಲು ಉಗ್ರ ಹೋರಾಟ ನಡೆಸಲಾಗುವುದೆಂದು ತಮ್ಮಲ್ಲಿ ಮನವಿ ಸಲ್ಲಿಸಲಾಗಿದೆ. ಅದೇ ರೀತಿ ತನ್ಮೂಲಕ ಕೋರೋನಾ ಸೋಂಕು ಹರಡಿದ ರೋಗಿಗಳ ಖಾಸಗಿ ಆಸ್ಪತ್ರೆಯ ಚಿಕಿತ್ಸೆ ವೆಚ್ಚವನ್ನು ಮತ್ತು ಅವರ ಕುಟುಂಬ ನಿರ್ವಹಣೆಯ ಖರ್ಚನ್ನು ಕಾರ್ಖಾನೆಯೇ ಭರಿಸುವಂತೆ ತಾವುಗಳು ಕ್ರಮಕೈಗೊಳ್ಳಬೇಕೆಂದು ಮತ್ತೊಂದು ಸಲ ತಮ್ಮಲ್ಲಿ ವಿನಯ ಪೂರ್ವಕವಾಗಿ ಕ.ರ.ವೇ ರಾಜ್ಯ ಘಟಕ ಮನವಿ ಸಲ್ಲಿಸಲಾಗಿದೆ. ಈಸಂದರ್ಭದಲ್ಲಿ ಕ.ರ.ವೇ ಯ ಜಿಲ್ಲಾ ಯುವ ಅಧ್ಯಕ್ಷರು ಹಾಗೂ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿ ಹೆಚ್ ಹುಲುಗಪ್ಪ, ಜಿಲ್ಲಾ ಗೌರವಾಧ್ಯಕ್ಷರುಗಳಾದ ತಿಮ್ಮನಗೌಡ, ವೀರಾರೆಡ್ಡಿ, ಜಿಲ್ಲಾ ಕಾರ್ಯದರ್ಶಿ ಮೇಘನಾಥಗೌಡ, ಜಿಲ್ಲಾ ಜಂಟಿ ಕಾರ್ಯದರ್ಶಿ ವೆಂಕಟೇಶ್ ಮತ್ತಿತರ ಕಾರ್ಯಕರ್ತರು ಉಪಸ್ಥಿತರಿದ್ದರು.

# ಯರಗಟ್ಟಿ ಹಳ್ಳದಲ್ಲಿ ಬಿದ್ದು ಇಬ್ಬರು ಮಕ್ಕಳ ಸಾವು



ಯರಗಟ್ಟಿ : ಯರಗಟ್ಟಿ ಸಮೀಪ ಕಟಕೋಳ ರಸ್ತೆ ಜಮೀನ ತೋಟದ ಮನೆಯಲ್ಲಿ ವಾಸವಾಗಿದ್ದರು ಆಟ ಆಡುತ್ತಾ ಜಮೀನ ಪಕ್ಕದ ಕರ್ಣ(ಹಳ್ಳ) ಬಿದ್ದು 4 ಮಕ್ಕಳ ಇಬ್ಬರು ಮೃತರಾಗಿದ್ದು ಇಬ್ಬರು ಸ್ಥಿತಿ ಚಿಂತಾಜನಕವಾಗಿದ್ದು ಅವರನ್ನ ಬೆಳಗಾವಿ ಬೀಮ್ಸ ಆಸ್ಪತ್ರೆಗೆ ದಾಖಲಿಸಲಾಗಿದೆ.

ಮೃತರ ವಿವರ ಕುಮಾರಿ ಸಂಜೀತಾ ಗೋಪಾಲ

ದುರ್ಗಣ್ಣವರ 6 ವರ್ಷ ಸಾ: ಯರಗಟ್ಟಿ, ಕುಮಾರ ಸತೀಶ ಬಸಪ್ಪ ದುರ್ಗಣ್ಣವರ 8 ವರ್ಷ ಸಾ: ಯರಗಟ್ಟಿ ಗಾಯಾಳುಗಳ ವಿವರ ಕುಮಾರ ವಿರೇಶ ಬಸಪ್ಪ ದುರ್ಗಣ್ಣವರ 10 ವರ್ಷ, ಕುಮಾರ ನಾರಾಯಣ ಗೋಪಾಲ ದುರ್ಗಣ್ಣವರ 10 ವರ್ಷ ಸ್ಥಳಕ್ಕೆ ಮುರಗೋಡ ಪೊಲೀಸ್ ಠಾಣೆಯ ಪಿಎಸ್ ಪ್ರವೀಣ ಗಂಗೋಳ್ಳಿ ಭೇಟಿನೀಡಿ ಪ್ರಕರಣ ದಾಖಲಿಸಿಕೊಂಡಿದ್ದಾರ.

# ವೈಯಕ್ತಿಕ ಸುರಕ್ಷತೆಗೆ ಒತ್ತು ನೀಡಿ – ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ

ಗದಗ.ಜೂ.25: ಗದಗ ಜಿಲ್ಲೆಯ ಪೊಲೀಸ್ ಪಡೆ ಕೊವಿಡ್–19 ಸೋಂಕು ನಿಯಂತ್ರಣ ಲಾಕ್‌ಡ್‌ನ್ ಜಾರಿಯಲ್ಲಿ ಅಹೋರಾತ್ರಿ ಕಾಳಜಿ ಪೂರ್ವಕ ಅತ್ಯಂತ ಶ್ಲಾಘನೀಯ ಕಾರ್ಯ ಮಾಡಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯತೀಶ್ ಎನ್. ಸಂತಸ ವ್ಯಕ್ತಪಡಿಸಿದ್ದಾರೆ.

ಲಾಕಡೌನ ಜಾರಿ ಸಂದರ್ಭದಲ್ಲಿ ಜಿಲ್ಲಾ ಗಡಿಯ ಚೆಕ್ ಪೋಸ್ಟಗಳಲ್ಲಿ ವೈಯಕ್ತಿಕ ಶುಚಿತ್ವ, ಸುರಕ್ಷತೆ ಜೊತೆಗೆ ಸಾರ್ವಜನಿಕರನ್ನು ಕೊವಿಡ್–19 ಸೋಂಕಿನಿಂದ ರಕ್ಷಿಸುವ ಜಿಲ್ಲಾಡಳಿತ ಮತ್ತು ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಯೋಧರಾಗಿ ಪೊಲೀಸ್ ಪಡೆ ಕಾರ್ಯ ನಿರ್ವಹಿಸಿದೆ.ಕೊವಿಡ್–19 ಸೋಂಕು ನಿಯಂತ್ರಣದ ಮುಂದುವರಿದ ಕಾರ್ಯಾಚರಣೆಯಲ್ಲಿ ಈಗ ಲಾಕಡೌನ ತೆರವಿನ ಸ್ಥಿತಿಯಲ್ಲಿ ಹೆಚ್ಚಿನ ಜವಾಬ್ದಾರಿ ಮತ್ತು ವೈಯಕ್ತಿಕ ಸುರಕ್ಷತೆಯಿಂದ ಪೊಲೀಸ್ ಅಧಿಕಾರಿ ಸಿಬ್ಬಂದಿ ಸಾರ್ವಜನಿಕವಾಗಿ ಕರ್ತವ್ಯ ನಿರ್ವಹಿಸಬೇಕಾದ ಸಂದರ್ಭ ಒದಗಿ ಬಂದಿದೆ.

ಸ್ವತಃ ತಮ್ಮ, ತಮ್ಮ ಕುಟುಂಬದ ಸದಸ್ಯರ ಮತ್ತು ಸಹೋದ್ಯೋಗಿ ಅಧಿಕಾರಿ ಸಿಬ್ಬಂದಿಗಳ ಸುರಕ್ಷತೆ ಬಹಳ ಮುಖ್ಯವಾಗಿದ್ದು ಕರ್ತವ್ಯ ನಿರ್ವಹಣೆ ಹಾಗೂ ಇತರ ಸಂದರ್ಭಗಳಲ್ಲಿ ಕಡ್ಡಾಯವಾಗಿ ಕೊವಿಡ್–19 ಸೋಂಕು ತಡೆಗೆ ಇಲಾಖೆಯಿಂದ ಪೂರೈಸಲಾದ ಸುರಕ್ಷತಾ ಸಾಮಗ್ರೀಗಳಾದ ಮುಖಕ್ಕೆ ಮಾಸ್ಕ, ಹ್ಯಾಂಡ್‌ಗ್ಲೋಸ್, ಹೆಡ್‌ಶೀಲ್ಡ್, ಸ್ಯಾನಿಟೈಸರ್ ಬಳಸಬೇಕು. ಸಾಮಾಜಿಕ ಸುರಕ್ಷಿತ ಅಂತರ ಮತ್ತು ಆಗಾಗ ಕೈಗಳ ಶುಚಿತ್ವ ಕಾಯ್ದುಕೊಳ್ಳಬೇಕು. ಪೊಲೀಸ್ ಪಡೆ ಆದುದರಿಂದ ಎಚ್ಚರದಿಂದ ಕೆಲಸ ಮಾಡಬೇಕಿದೆ. ಇಂದಿನ ಮಾನವ ಸಮಾಜ ವಿಚಿತ್ರ ಸನ್ನಿವೇಶದಲ್ಲಿದೆ.

ಗದಗ ಜಿಲ್ಲೆಯಲ್ಲಿ ಕೊರೊನಾ ರೋಗ ನಿಯಂತ್ರಣಕ್ಕಾಗಿ ಹಾಗೂ ಕೊವಿಡ್–19 ನಿರ್ಭಂದಿತ ಪ್ರದೇಶಗಳಲ್ಲಿ ಕಾರ್ಯನಿರ್ವಹಿಸಿದ 250 ಪೋಲಿಸ್ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ ಕೊವಿಡ್–19 ತಪಾಸಣೆ ಮಾಡಿಸಲಾಗಿದ್ದು, ವರದಿಗಳು ನೆಗೆಟಿವ್ ಬಂದಿರುವುದು ನೆಮ್ಮದಿ ತಂದಿದೆ. ಒಂದು ವೇಳೆ ಮುಂದಿನ ದಿನಗಳಲ್ಲಿ ಕರ್ತವ್ಯದಲ್ಲಿರುವ ಪೊಲೀಸರಿಗೆ ಕೊವಿಡ್–19 ರೋಗ ಲಕ್ಷಣ ಕಂಡು ಬಂದಲ್ಲಿ, ಪೊಲೀಸ್ ಇಲಾಖೆಯಿಂದ ವೈದ್ಯಕೀಯ ಹಾಗೂ ಇತರೆ ಸೌಲಭ್ಯಗಳನ್ನು ಒದಗಿಸಲಾಗುವುದು ಎಂದು ಜಿಲ್ಲಾ ವರಿಷ್ಠಾಧಿಕಾರಿಗಳು ಪೊಲೀಸರಿಗೆ ಭರವಸೆ ನೀಡಿದ್ದಾರೆ.

ಕೊರೊನಾ ವಿರುದ್ಧ ನಾವೆಲ್ಲರೂ ಹೋರಾಡುವುದರೊಂದಿಗೆ ಜೀವನ ನಿರ್ವಹಣೆ ಮಾಡುವುದು ಅನಿವಾರ್ಯವಾಗಿದ್ದು, ಪೊಲೀಸ್ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಾಲಕಾಲಕ್ಕೆ ನೀಡುವ ಎಸ್.ಓ.ಪಿ ನಿರ್ದೇಶನಗಳನ್ನು ಸಾರ್ವಜನಿಕರಾದಿಯಾಗಿ ಪಾಲಿಸೋಣ, ಕೊರೊನಾ ನಿಯಂತ್ರಿಸೋಣ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯತೀಶ್ ಎನ್. ಅವರು ತಿಳಿಸಿದ್ದಾರೆ.

# ಸೇವಾಸಿಂಧು ಇಲ್ಲದೇ ಆಗಮಿಸುವವರ ವಿರುದ್ಧ ಕಾನೂನು ರೀತ್ಯ ಕ್ರಮ : ತಹಶೀಲ್ದಾರ್ ಹೆಚ್.ವಿಶ್ವನಾಥ್



ಬಳ್ಳಾರಿ/ಹೊಸಪೇಟೆ,ಜೂ.25: ಸೇವಾಸಿಂಧುವಿನಲ್ಲಿ ನೋಂದಾಯಿಸದೇ ಸಾರ್ವಜನಿಕರು ಅನ್ಯರಾಜ್ಯದಿಂದ ಆಗಮಿಸುತ್ತಿರುವುದು ತಾಲೂಕು ಆಡಳಿತದ ಗಮನಕ್ಕೆ ಬಂದಿದೆ, ಅಂತವರು ತಕ್ಷಣವೇ ಸರ್ಕಾರಿ ಆಸ್ಪತ್ರೆಯಲ್ಲಿ ತಪಾಸಣೆಗೆ ಒಳಪಡಬೇಕು ಇಲ್ಲವಾದಲ್ಲಿ ಅವರ ವಿರುದ್ಧ ಕಾನೂನು ರೀತ್ಯ ಕ್ರಮಗೊಳ್ಳಲಾಗುವುದು ಎಂದು ತಹಶೀಲ್ದಾರ್ ಹೆಚ್.ವಿಶ್ವನಾಥ್ ಅವರು ಎಚ್ಚರಿಸಿದರು.

ನಗರದ ತಾಲೂಕು ಕಚೇರಿಯಲ್ಲಿ ಗುರುವಾರದಂದು ಕೋವಿಡ್–19 ಸಾಂಕ್ರಾಮಿಕ ರೋಗದ ಮುಂಜಾಗೃತಾ ಕ್ರಮವಾಗಿ ನೋಡಲ್ ಅಧಿಕಾರಿಗಳೊಂದಿಗೆ ಸಭೆಯಲ್ಲಿ ಮಾತನಾಡಿದರು.

ಸೇವಾಸಿಂಧು ಮೂಲಕ ಅಕ್ರಮವಾಗಿ ತಾಲೂಕನ್ನು ಯಾರಾದರೂ ಪ್ರವೇಶಿಸಿದ್ದು ತಾಲೂಕು ಆಡಳಿತ ಗಮನಕ್ಕೆ ತಿಳಿದು ಬಂದರೆ ಅಂತವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ ಅಡಿಯಲ್ಲಿ ಕ್ರಮ ಕೈಗೊಳ್ಳಲಾಗುವುದು. ದಿನೇ ದಿನೇ ಕೋವಿಡ್–19 ಪ್ರಕರಣಗಳು ಹೆಚ್ಚಾಗುತ್ತಿದ್ದು, ಸಾರ್ವಜನಿಕರು ಅನಗತ್ಯವಾಗಿ ಓಡಾಡಬಾರದು ಅತ್ಯವಸರ ಕೆಲಸವಿದ್ದಲ್ಲಿ ಮಾಸ್ಕ್ ಮತ್ತು ಸ್ಯಾನಿಟೈಸರ್ ಜೊತೆ ಸುರಕ್ಷತಾ ಕ್ರಮಗಳೊಂದಿಗೆ ಸಾಮಾಜಿಕ ಅಂತರವನ್ನು ಕಾಯ್ದುಕೊಂಡು ಸಂಚರಿಸಬೇಕು.

ಹಿರಿಯರು ಮತ್ತು ಮಕ್ಕಳು ಹೊರಬಾರದಂತೆ ನೋಡಿಕೊಂಡು ಸಾರ್ವಜನಿಕರು ತಾಲೂಕು ಆಡಳಿತದೊಂದಿಗೆ ಸಹಕಾರ ನೀಡಬೇಕೆಂದು ತಿಳಿಸಿದರು.

52 ಸೋಂಕಿತರಿಗೆ ಚಿಕಿತ್ಸೆ ಕಾರ್ಯ: ತಾಲೂಕಿನಲ್ಲಿ ಒಟ್ಟು 83 ಕೋವಿಡ್ ಪ್ರಕರಣಗಳು ದಾಖಲಾಗಿದ್ದು, ಬುಧವಾರ ಮೂವರು ಬಿಡುಗಡೆಯಾಗಿದ್ದಾರೆ, ಸದ್ಯ 52 ಜನ ಸೋಂಕಿತರು ಚಿಕಿತ್ಸೆ ಪಡೆಯುತ್ತಿದ್ದಾರೆ. ನಗರದ 20 ಪ್ರಕರಣಗಳು ಜಿಂದಾಲ್ ಕಾರ್ಖಾನೆಗೆ ಸಂಬಂಧಿಸಿದ್ದಾಗಿವೆ. 486 ಜನ ಹೋಂ ಕ್ವಾರಂಟೈನ್‌ನಲ್ಲಿದ್ದು, ಸೋಂಕಿತರ ಮನೆಯಿಂದ 10ಮೀ. ಅಂತರದ ಪ್ರದೇಶವನ್ನು ಮಾತ್ರ 14 ದಿನ ಸೀಲ್‌ಡೌನ್ ಮಾಡಲಾಗುತ್ತಿದೆ. ನಗರದಲ್ಲಿ ಒಟ್ಟು 58 ಪ್ರದೇಶಗಳು ಪ್ರಸ್ತುತ ಸೀಲ್‌ಡೌನ್ ಆಗಿವೆ ಎಂದು ವೈದ್ಯಾಧಿಕಾರಿ ಡಾ.ಭಾಸ್ಕರ್ ಅವರು ತಿಳಿಸಿದರು.

ಎಸ್‌ಎಸ್‌ಎಲ್‌ಸಿ ಪರೀಕ್ಷೆ: ನಗರದ ಯಾವ ವಿದ್ಯಾರ್ಥಿ ಸಹ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಿಂದ ವಂಚಿತನಾಗಿಲ್ಲ, ಕೇವಲ ಕಂಟೈನ್‌ಮೆಂಟ್ ಪ್ರದೇಶದ 63 ವಿದ್ಯಾರ್ಥಿಗಳು ಪರೀಕ್ಷೆಗೆ ಆಗಮಿಸುತ್ತಿದ್ದು, ಅವರಿಗಾಗಿ ಪ್ರತ್ಯೇಕ ಕೋಠಡಿಗಳ ವ್ಯವಸ್ಥೆ ಕಲ್ಪಿಸಲಾಗಿತ್ತು ಎಂದು ತಹಶೀಲ್ದಾರ್ ಅವರು ತಿಳಿಸಿದರು.

ಕಡ್ಡಾಯ ಮಾಸ್ಕ್; 1.87 ಲಕ್ಷ ದಂಡ ವಸೂಲಿ: ಸಾಮಾಜಿಕ ಅಂತರ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಮಾಸ್ಕ್ ಧರಿಸದವರಿಗೆ ದಂಡ ವಿಧಿಸಲಾಗುತ್ತಿದ್ದು, ನಗರಸಭೆಯು ಇಲ್ಲಿಯವರೆಗೆ ರೂ.1 ಲಕ್ಷದ 87 ಸಾವಿರ ದಂಡ ವಸೂಲಿ ಮಾಡಲಾಗಿದೆ. ನಗರಸಭೆಯಲ್ಲಿ ಸಾರ್ವಜನಿಕ ಹಾಗೂ ಸರ್ಕಾರಿ ಸೇವೆಗಳು ಮುಂಜಾಗೃತಾ ಕ್ರಮಗಳೊಂದಿಗೆ ನಡೆಯುತ್ತಿದ್ದು, ಸಾರ್ವಜನಿಕರು ವೃದ್ಧರನ್ನು ಕಚೇರಿಗೆ ಕರೆದುಕೊಂಡು ಬರದೇ ಅವರ ಮೂಲ ದಾಖಲಾತಿ, ಗುರುತಿನ ಪತ್ರದೊಂದಿಗೆ ಕಚೇರಿಗೆ ಆಗಮಿಸಿ ಸೇವೆ ಪಡೆದುಕೊಳ್ಳಬೇಕು ಎಂದು ಪೌರಾಯುಕ್ತೆ ಜಯಲಕ್ಷ್ಮಿ ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಡಿವೈಎಸ್‌ಪಿ ವಿ.ರಘುಕುಮಾರ್ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

# ಜಿಲ್ಲೆಯಲ್ಲಿ 2 ಸಾವಿರ ತೋಟ ನಿರ್ಮಾಣ ಗುರಿ ಜಿ.ಪಂ ಅಧ್ಯಕ್ಷ ರಾಜೂಗೌಡ ಕೆಂಚನಗೌಡ್ರ



ಗದಗ.ಜೂ.25: ಕೋವಿಡ್–19 ಲಾಕ್‌ಡೌನ್‌ನಿಂದಾಗಿ ಜಿಲ್ಲೆಯಲ್ಲಿ ನಿರುದ್ಯೋಗ ಸಮಸ್ಯೆ ತಲೆದೋರದಂತೆ ತಡೆಯಬೇಕು. ಅದಕ್ಕಾಗಿ ಜಿಲ್ಲೆಯ ಯುವ ರೈತರನ್ನು ತೋಟಗಾರಿಕೆ ಬೆಳಗಳ ಕಡೆಗೆ ಆಕರ್ಷಿತರನ್ನಾಗಿ ಮಾಡಬೇಕು. ಈ ನಿಟ್ಟಿನಲ್ಲಿ ಗದಗ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ 2 ಸಾವಿರ ಹೊಸ ತೋಟಗಳ ನಿರ್ಮಿಸಲು ತೋಟಗಾರಿಕೆ ಅಧಿಕಾರಿಗಳು ಶ್ರಮಿಸಬೇಕು ಎಂದು ಜಿಲ್ಲಾ ಪಂಚಾಯತ್ ಅಧ್ಯಕ್ಷ ರಾಜೂಗೌಡ ಕೆಂಚನಗೌಡ್ರ ಅವರು ಸೂಚಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಅಧ್ಯಕ್ಷರ ಕೊಠಡಿಯಲ್ಲಿ (ಜೂನ್ 25) ತೋಟಗಾರಿಕೆ ಯೋಜನೆಗಳ ಕುರಿತು ಜರುಗಿದ ತೋಟಗಾರಿಕೆ ಇಲಾಖೆಯ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ ಸಾಲಿನಲ್ಲಿ ನೆರೆಯಿಂದಾಗಿ ಜಿಲ್ಲೆಯ ರೈತರ ತೋಟಗಳು ವಿನಾಶದ ಅಂಚಿಗೆ ತಲುಪಿವೆ. ಅವುಗಳಿಗೆ ಇಲಾಖೆಯಲ್ಲಿ ಇರುವ ಯೋಜನೆಗಳನ್ನು ಬಳಸಿಕೊಂಡು ತೋಟಗಳನ್ನು ಯಾವ ರೀತಿಯಲ್ಲಿ ಮರುನಿರ್ಮಾಣ ಮಾಡಬಹುದು, ನರೇಗಾದಲ್ಲಿ ತೋಟಗಾರಿಕೆಗೆ ಹೇಗೆ ಪ್ರೋತ್ಸಾಹಿಸಬಹುದು ಎಂಬುದರ ಕುರಿತು ಚರ್ಚಿಸಿದರು.

ಮಹಾತ್ಮಾ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯನ್ನು ತೋಟಗಾರಿಕೆ ಪ್ರದೇಶ ವೃದ್ಧಿಸಲು ಬಳಸುವ ಬಗ್ಗೆ ಪರಿಶೀಲಿಸಿದ ಅವರು, ಜಿಲ್ಲೆಯ ಕೂಲಿ ಕಾರ್ಮಿಕರು ಬೆರೆಡೆ ವಲಸೆ ಹೊಗದಂತೆ ವರ್ಷ ಪೂರ್ತಿ ಉದ್ಯೋಗ ದೊರೆಯುವಂತೆ ತೋಟಗಾರಿಕೆ ಕ್ಷೇತ್ರವು ಬೆಳೆಯಬೇಕು ಎಂದರು.ತೋಟಗಾರಿಕೆ ಕ್ಷೇತ್ರವು ಅಧಿಕವಾದರೆ ರೈತರಿಗೆ ವರ್ಷ ಪೂರ್ತಿ ಆದಾಯದ ಮೂಲ ದೊರೆತಂತಾಗುವುದು. ಜಿಲ್ಲೆಯ ಯುವ ರೈತರಿಗೆ ತೋಟಗಾರಿಕೆಯಲ್ಲಿ ಇರುವ ವಿಪುಲ ಅವಕಾಶಗಳ ಬಗ್ಗೆ ಅರಿವು ಮೂಡಿಸಿ, ತೋಟ ನಿರ್ಮಾಣಕ್ಕೆ ಮುಂದಾಗುವಂತೆ ಪ್ರೋತ್ಸಾಹವನ್ನು ಅಧಿಕಾರಿಗಳು ನೀಡಬೇಕು ಎಂದರು.

ಯುವ ರೈತ ಸಮುದಾಯವನ್ನು ಒಂದೆಡೆ ಸೇರಿಸಿ ಜಿಲ್ಲೆಯಲ್ಲಿ ತೋಟಗಾರಿಕೆ ಕ್ಷೇತ್ರದಲ್ಲಿ ಸಾಧನೆಗೈದ ರೈತರೊಂದಿಗೆ ಸಂವಾದ ನಡೆಸಬೇಕು. ಇದರಿಂದ ರೈತರು ಪ್ರೇರಣೆ ಪಡೆದು ತೋಟ ನಿರ್ಮಾಣಕ್ಕೆ ಮುಂದಾಗುವರು ಈ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಅಧ್ಯಕ್ಷ ರಾಜೂಗೌಡ ಕೆಂಚನಗೌಡ್ರ ಸೂಚಿಸಿದರು.

ಜಿಲ್ಲಾ ಪಂಚಾಯತ್ ಸದಸ್ಯೆ ಸಿದ್ದಲಿಂಗೇಶ್ವರ ಪಾಟೀಲ ಮಾತನಾಡಿ, ತೋಟಗಾರಿಕೆ ಇಲಾಕೆಯಲ್ಲಿರುವ ವಿವಿಧ ಯೋಜನೆಗಳ ಬಗ್ಗೆ ಹಾಗೂ ಸಬ್ಸಿಡಿಗಳ ಕುರಿತು ರೈತರಿಗೆ ಅರಿವು ಮೂಡಿಸಿ, ಸೌಲಭ್ಯಗಳು ದೊರೆಯುವಂತೆ ಮಾಡಬೇಕು. ಈಲ್ಲೆಯ ರೈತರು ಸಹ ತೋಟಗಾರಿಕೆಯಲ್ಲಿ ನೂತನ ತಂತ್ರಾಂಶಗಳನ್ನು ಅಳವಡಿಸಿಕೊಳ್ಳಲು ಸಿದ್ಧರಿದ್ದು, ಅಧಿಕಾರಿಗಳು ಸಹಕಾರ ನೀಡಿ ರೈತರಿಗೆ ಅನುಕೂಲ ಮಾಡಿಕೊಡಬೇಕು ಎಂದರು.

ಸಭೆಯಲ್ಲಿ ತೋಟಗಾರಿಕೆ ಉಪನಿರ್ದೇಶಕ ಶಶಿಕಾಂತ ಕೋಟಿಮನಿ, ಹಿರಿಯ ತೋಟಗಾರಿಕೆ ಸಹಾಯಕ ನಿರ್ದೇಶಕ ಶೈಲೇಂದ್ರ ಬೀರಾದರ ಸೇರಿದಂತೆ ತಾಲ್ಲೂಕುಗಳ ತೋಟಗಾರಿಕೆ ಸಹಾಯಕ ನಿರ್ದೇಶಕರು ಹಾಜರಿದ್ದರು.

ಜಿಲ್ಲೆಯಲ್ಲಿ ತೋಟಗಾರಿಕೆ ಬೆಳೆಗಳ ಸಂಗ್ರಹ ಹಾಗೂ ಸಂರಕ್ಷಣೆಗಾಗಿ ಶೀಥಲಿಕರಣ ಘಟಕ (ಕೋಲ್ಡ್ ಸ್ಟೋರೇಜ್) ಅಗತ್ಯವಿದ್ದು, ಶೀಥಲಿಕರಣ ಘಟಕ ಸ್ಥಾಪನೆಗೆ ಜಿಲ್ಲಾ ಉಸ್ತುವಾರಿ ಸಚಿವ ಸಿ.ಸಿ.ಪಾಟೀಲ ಹಾಗೂ ಹಿರಿಯ ಶಾಸಕರಾದ ಹೆಚ್.ಕೆ.ಪಾಟೀಲ ಅವರೊಂದಿಗೆ ಚರ್ಚಿಸಿ, ಅವರ ಮಾರ್ಗದರ್ಶನದಂತೆ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸಲಾಗುವುದು.– ಜಿ.ಪಂ ಅಧ್ಯಕ್ಷ ರಾಜೂಗೌಡ ಕೆಂಚನಗೌಡ್ರ.

# ಅನಧಿಕೃತ ಸಾರ್ವಜನಿಕ ಜಾಹೀರಾತು ಫಲಕಗಳ ತೆರವು–ದಮ್ಮೂರು ಶೇಖರ್




ಬಳ್ಳಾರಿ, ಜೂ.25 : ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಅಳವಡಿಸಿರುವ ಸಾರ್ವಜನಿಕ ಜಾಹಿರಾತು ಫಲಕಗಳನ್ನು (ಫ್ಲೆಕ್ಸ್ ಗಳನ್ನು) ತೆರವುಗೊಳಿಸುವ ಬಗ್ಗೆ ಮಹಾನಗರ ಪಾಲಿಕೆ ಆಯುಕ್ತರಾದ ತುಷಾರಮಣಿ ಅವರೊಂದಿಗೆ ಚರ್ಚಿಸಿ ಸರ್ವಾನುಮತದಿಂದ ಅನಧಿಕೃತವಾಗಿ ಅಳವಡಿಸಿರುವ ಸಾರ್ವಜನಿಕ ಜಾಹೀರಾತು ಫಲಕಗಳನ್ನು ತೆರವುಗೊಳಿಸಲಾಯಿತು.

ಅದರಂತೆ ಪಾಲಿಕೆ ವತಿಯಿಂದ ಜೆಸಿಬಿ ಯಂತ್ರದಿಂದ ಅನಧಿಕೃತವಾಗಿ ಅಳವಡಿಸಿರುವ ಸಾರ್ವಜನಿಕ ಜಾಹೀರಾತು ಫಲಕಗಳನ್ನು ತೆರವುಗೊಳಿಸಲಾಗಿದೆ ಎಂದು ಬುಡಾ ಅಧ್ಯಕ್ಷ ದಮ್ಮೂರು ಶೇಖರ್ ಅವರು ತಿಳಿಸಿದ್ದಾರೆ.ಇದೇ ಸಂದರ್ಭದಲ್ಲಿ ಮಹಾನಗರಪಾಲಿಕೆ ಆಯುಕ್ತರಾದ ತುಷಾರಮಣಿ, ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾದ ಈರಪ್ಪ, ಪ್ರಾಧಿಕಾರದ ಸಹಾಯಕ ಕಾರ್ಯಪಾಲಕ ಅಭಿಯಂತರಾದ ರವಿಶಂಕರ್, ನಗರಾಭಿವೃದ್ಧಿ ಪ್ರಾಧಿಕಾರದ ಹಾಗೂ ಮಹಾನಗರ ಪಾಲಿಕೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಜೂನ್ 29 ರಂದು ನಗರಾಭಿವೃದ್ಧಿ ಸಚಿವ ಬಿ.ಎ.ಬಸವರಾಜ ಅವರು ಜಿಲ್ಲೆಗೆ ಭೇಟಿ



ಬಳಾರಿ,ಜೂ 25: ನಗರಾಭಿವೃದ್ಧಿ ಸಚಿವರಾದ ಬಿ.ಎ.ಬಸವರಾಜ ಅವರು ರಸ್ತೆ ಮೂಲಕ ಇದೇ ಜೂನ್ 29 ರಂದು ಬಳ್ಳಾರಿ ಜಿಲ್ಲೆಗೆ ಆಗಮಿಸಲಿದ್ದಾರೆ ಎಂದು ಸಚಿವರ ಆಪ್ತ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಸಚಿವರು ಅಂದು ಬೆಳಗ್ಗೆ 10 ಕ್ಕೆ ಕೆ.ಯು.ಐ.ಡಿ.ಎಫ್.ಸಿ ವತಿಯಿಂದ ನಿರ್ಮಿಸಿರುವ 24*7 ನೀರು ಸರಬರಾಜು ಯೋಜನೆಯ 12 ವಲಯಗಳ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.ನಂತರ ಸಚಿವರು ಮಧ್ಯಾಹ್ನ 1.30ಕ್ಕೆ ಹೊಸಪೇಟೆಗೆ ತೆರಳಿ ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರ ಸಭಾಂಗಣದಲ್ಲಿ ಹೊಸಪೇಟೆ ನಗರ ನೀರು ಸರಬರಾಜು ಕಾಮಗಾರಿಗಳ ಲೋಕಾರ್ಪಣೆ ಹಾಗೂ ನಗರಾಭಿವೃದ್ಧಿ ಪ್ರಾಧಿಕಾರದ ಪ್ರಗತಿ ಪರಿಶೀಲನೆ ಸಭೆ ನಡೆಸಲಿದ್ದಾರೆ. ನಂತರ ಸಚಿವರು ಮಧ್ಯಾಹ್ನ 3ಕ್ಕೆ ಕೊಪ್ಪಳ ಜಿಲ್ಲೆಗೆ ಪ್ರಯಾಣ ಬೆಳಸಲಿದ್ದಾರೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್.ಎಸ್.ಎಲ್.ಸಿ. ದ್ವಿತಿಯ ಭಾಷೆ ಪರೀಕ್ಷೆ : ವಿದ್ಯಾರ್ಥಿಗಳ ವಿವರ

ಗದಗ.ಜೂನ್ 25 : ಜಿಲ್ಲೆಯಲ್ಲಿ ನಡೆದ ಎಸ್.ಎಸ್.ಎಲ್.ಸಿ. ದ್ವಿತಿಯ ಭಾಷೆ ಪರೀಕ್ಷೆಗೆ ನೊಂದಣಿಯಾಗಿದ್ದ 13,773 ವಿದ್ಯಾರ್ಥಿಗಳ ಪೈಕಿ 13,228 ವಿದ್ಯಾರ್ಥಿಗಳು ಹಾಜರಾಗಿರುತ್ತಾರೆ. 545 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಾರೆ. ಇದರಲ್ಲಿ ಕೋವಿಡ್–19 ಪ್ರತಿಬಂಧಿತ ಪ್ರದೇಶದಿಂದ 22 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದಾರೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎನ್.ಎಚ್. ನಾಗೂರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಗೆ ಶೈಲಾ ಸೀತಾರಾಮ ನೇಮಕ



ಬಳ್ಳಾರಿ,ಜೂ.25–ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಲೆಮಾರಿ, ಅರೆ ಅಲೆಮಾರಿ, ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಸಮುದಾಯಗಳ ಅಭಿವೃದ್ಧಿಗಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸುವ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿಗೆ ಸದಸ್ಯರಾಗಿ ಶೈಲಾ ಸೀತಾರಾಮ್ ನೇಮಕವಾಗಿದ್ದಾರೆ.

ಈ ಕುರಿತು ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ, ಪ.ಜಾತಿ,ಪ.ವರ್ಗಗಳ ಅಲೆಮಾರಿ, ಅರೆ ಅಲೆಮಾರಿ, ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಸಮುದಾಯಗಳ ಅಭಿವೃದ್ಧಿ ಕೋಶದ ಜಿಲ್ಲಾ ವ್ಯವಸ್ಥಾಪಕರು ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಾರ್ಯಾಲಯದ ನಡುವಳಿ ಆದೇಶದನ್ವಯ ಇವರನ್ನು ಸರ್ಕಾರೇತರ ಸದಸ್ಯರನ್ನಾಗಿ ನಾಮ ನಿರ್ದೇಶನ ಮಾಡಿರುವುದಾಗಿ ತಿಳಿಸಿದ್ದಾರೆ.

# ಸೋಡಿಯಂ ಹೈಪೊಕ್ಲೋರೈಟ್ ದ್ರಾವಣ ಸರಬರಾಜು ಮಾಡಲು ಅರ್ಜಿ ಆಹ್ವಾನ

ಬಳ್ಳಾರಿ,ಜೂ 25: ಜಿಲ್ಲೆಯಲ್ಲಿ ಕರೋನಾ ವೈರಾಣು ಸೋಂಕು ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಸೋಂಕು ಹರಡದಂತೆ ತಡೆಗಟ್ಟಲು ಅವಶ್ಯವಿರುವುದರಿಂದ ಸೋಡಿಯಂ ಹೈಪೊಕ್ಲೋರೈಟ್ ದ್ರಾವಣವನ್ನು ಸರಬರಾಜು ಮಾಡಲು ಅರ್ಹ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜಿಲ್ಲೆಯ ವ್ಯಾಪ್ತಿಯ ಬರುವ ಕಂಟೈನ್‌ಮೆಂಟ್ ಪ್ರದೇಶ ಹಾಗೂ ಇತರೆ ಸಾರ್ವಜನಿಕ ಪ್ರದೇಶಗಳಲ್ಲಿ ಡಿಸ್–ಇನ್‌ಫೆಕ್ಷನ್ ಕೈಗೊಳ್ಳಲು ಸೋಡಿಯಂ ಹೈಪೊಕ್ಲೋರೈಟ್ ದ್ರಾವಣ ಅವಶ್ಯವಿದ್ದು, ಸೋಂಕು ತಡೆಗಟ್ಟುಲು ಹಾಗೂ ನಿಯಂತ್ರಣಕ್ಕೆ ಬೇಕಾಗುವ ಅವಶ್ಯ ಸಾಮಾಗ್ರಿಗಳನ್ನು ನೇರವಾಗಿ ಸರಬರಾಜು ಮಾಡಲು ಅರ್ಹ ಸಂಸ್ಥೆಗಳಿಂದ ಧರಪಟ್ಟಿ ಆಹ್ವಾನಿಸಲಾಗಿದೆ.

ಸಾಮಾಗ್ರಿಗಳ ಧರವನ್ನು ನಮೂದಿಸಿ ಲಕೋಟೆಯಲ್ಲಿ ಯೋಜನಾ ನಿರ್ದೇಶಕರು, ಜಿಲ್ಲಾನಗರಾಭಿವೃದ್ಧಿ ಕೋಶ, ಜಿಲ್ಲಾಧಿಕಾರಿಗಳ ಕಾರ್ಯಾಲಯ, ಬಳ್ಳಾರಿ ಕಚೇರಿಗೆ ಜೂ.30 ರೊಳಗಾಗಿ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂನ್ 29ಕ್ಕೆ ಬಹಿರಂಗ ಹರಾಜು

ಬಳ್ಳಾರಿ,ಜೂ.25: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಬಳ್ಳಾರಿ ಹಿರಿಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿರುವ ಅನುಪಯುಕ್ತ ವಸ್ತುಗಳ ವಿಲೇವಾರಿಗೆ ಇದೇ ಜೂನ್ 29 ರಂದು ಬೆಳಿಗ್ಗೆ 11 ಗಂಟೆಗೆ ಕಚೇರಿ ಆವರಣದಲ್ಲಿ ಬಹಿರಂಗ ಹರಾಜು ಜರುಗಲಿದೆ.

ಆಸಕ್ತರು ಸದರಿ ದಿನದಂದು ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾಧಿಕಾರಿ ಕಚೇರಿ ಆವರಣ, ಬಳ್ಳಾರಿಯಲ್ಲಿ ನಡೆಯುವ ಬಹಿರಂಗ ಹರಾಜಿನಲ್ಲಿ ಭಾಗವಹಿಸಬಹುದಾಗಿದೆ ಎಂದು ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಯಾದ್ಯಂತ ಎಸ್ಸೆಸ್ಸೆಲ್ಸಿ ಪರೀಕ್ಷೆ ಸುಸೂತ್ರ ಆರಂಭ* 1991 ವಿದ್ಯಾರ್ಥಿಗಳು ಗೈರು

ಅನಾರೋಗ್ಯ : ವಿಶೇಷ ಕೊಠಡಿಯಲ್ಲಿ ಪರೀಕ್ಷೆ ಬರೆದ 16 ವಿದ್ಯಾರ್ಥಿಗಳು

ಬಳ್ಳಾರಿ,ಜೂ.25 ಬಳ್ಳಾರಿಯಲ್ಲಿ ಇಂದಿನಿಂದ ಆರಂಭವಾದ ಎಸ್ಸೆಸ್ಸೆಲ್ಸಿ ಪರೀಕ್ಷೆಯು ಅತ್ಯಂತ ಸುಸೂತ್ರವಾಗಿ ನಡೆಯಿತು. ದ್ವಿತೀಯ ಭಾಷೆ ಪರೀಕ್ಷೆಗೆ ಹೆಸರು ನೋಂದಾಯಿಸಿಕೊಂಡಿದ್ದ 39300 ವಿದ್ಯಾರ್ಥಿಗಳಲ್ಲಿ 37309 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾದರು. 1991ವಿದ್ಯಾರ್ಥಿಗಳು ಗೈರುಹಾಜರಾಗಿದ್ದರು ಎಂದು ಡಿಡಿಪಿಐ ಸಿ.ರಾಮಪ್ಪ ಅವರು ತಿಳಿಸಿದ್ದಾರೆ.

ಹಾಜರಾದವರಲ್ಲಿ ಅನಾರೋಗ್ಯ ಕಾರಣದಿಂದ ವಿಶೇಷ ಕೊಠಡಿಯಲ್ಲಿ 16 ವಿದ್ಯಾರ್ಥಿಗಳು ಪರೀಕ್ಷೆ ಬರೆದರು. 163 ವಿದ್ಯಾರ್ಥಿಗಳು ಕಂಟೈನ್ಮೆಂಟ್ ಪ್ರದೇಶದಿಂದ ಬಂದು ಪರೀಕ್ಷೆ ಬರೆದರು. 37437 ವಿದ್ಯಾರ್ಥಿಗಳು ಮೊದಲ ಬಾರಿಗೆ ಪರೀಕ್ಷೆಗೆ ಹಾಜರಾಗಿದ್ದಾರೆ. 1863 ಖಾಸಗಿ ವಿದ್ಯಾರ್ಥಿಗಳಲ್ಲಿ 1405ಜನ ಪರೀಕ್ಷೆಗೆ ಹಾಜರಾಗಿದ್ದರು. ಪರೀಕ್ಷಾ ಕೇಂದ್ರಕ್ಕೆ ವಿದ್ಯಾರ್ಥಿಗಳನ್ನು ಕರೆತರಲು 28 ಬಸ್ ಹಾಗೂ ಇತರೇ ವಾಹನಗಳನ್ನು ಒಪ್ಪಂದದ ಮೇರೆಗೆ ಪಡೆಯಲಾಗಿತ್ತು. ಪಾಸ್ ಪಡೆದಿದ್ದ ನೆರೆರಾಜ್ಯದ 8 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾದರು. 561 ವಲಸೆ ವಿದ್ಯಾರ್ಥಿಗಳಲ್ಲಿ 557 ಜನ ಪರೀಕ್ಷೆಗೆ ಹಾಜರಾದರು. 1274 ಹಾಸ್ಟೆಲ್ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಯಾವುದೇ ರೀತಿಯ ಪರೀಕ್ಷಾ ಅವ್ಯವಹಾರಗಳು ನಡೆದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.